# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1261
ಸದಸ್ಯರ ಹೆಸರು : ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 29.12.2022.
ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಯವರು.

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ದಿನಾಂಕ:29-09-2022 ರಂದು ಚುನಾಯಿತ ಜನಪ್ರತಿನಿಧಿಗಳ ಅಧಿಕಾರ ಮೊಟಕುಗೊಳಿಸಿ ಹೊರಡಿಸಿರುವ ಆದೇಶವನ್ನು ಯಾವ ಮಾನದಂಡಗಳ ಆಧಾರದ ಮೇಲೆ ಹೊರಡಿಸಲಾಗಿದೆ? | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ರ ರಾಜ್ ಇಲಾಖೆಯು ದಿನಾಂಕ:29-09-2022 ರಂದು ಚುನಾಯಿತ ಜನಪ್ರತಿನಿಧಿಗಳ ಅಧಿಕಾರ ಮೊಟಕುಗೊಳಿಸುವುದಕ್ಕೆ ಸಂಬಂಧಿಸಿದಂತೆ ಸರ್ಕಾರದಿಂದ ಯಾವುದೇ ಆದೇಶ ಹೊರಡಿಸಿರುವುದಿಲ್ಲ. |
| (ಆ) | ಸಾಮಾನ್ಯ ಸಭೆಯ ಅನುಮೋದನೆಯಿಲ್ಲದೇ ಕೆಲವು ಪ್ರಮಾಣ ಪತ್ರಗಳನ್ನು ವಿತರಿಸಲು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಅನುಮತಿ ನೀಡಿದ್ದು, ವಿಕೇಂದ್ರೀಕರಣ ವ್ಯವಸ್ಥೆಗೆ ಧಕ್ಕೆಯಾಗುವುದಿಲ್ಲವೇ; ಈ ಬಗ್ಗೆ ಸರ್ಕಾರದ ನಿಲುವೇನು? | ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯ ಅನುಮೋದನೆಯಿಲ್ಲದೆ ಪ್ರಮಾಣ ಪತ್ರಗಳನ್ನು ವಿತರಿಸಲು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಅನುಮತಿ ನೀಡಿರುವುದಿಲ್ಲ. |
| (ಇ) | ಮೇಲಿನ ಆದೇಶಕ್ಕೆ ವ್ಯಾಪಕ ವಿರೋಧ ವ್ಯಕ್ತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಏನು ಕ್ರಮಕೈಗೊಂಡಿದೆ? (ಸಂಪೂರ್ಣ ವಿವರ ನೀಡುವುದು) | ಅನ್ವಯಿಸುವುದಿಲ್ಲ. |
| (ಈ) | ಮೇಲಿನ ಆದೇಶವನ್ನು ಸಂಪೂರ್ಣವಾಗಿ ಇಲಾಖೆಯಿಂದ ಹಿಂಪಡೆಯಲಾಗಿದೆಯೇ; ಈ ಬಗ್ಗೆ ರಾಜ್ಯ ಮಂತ್ರಿ ಮಂಡಲದ ಕೆಲವು ಸಚಿವರು ಪತ್ರಿಕೆ ಹೇಳಿಕೆ ನೀಡಿದ್ದು, ಇಲಾಖೆಯಲ್ಲಿ ಹಿಂಪಡೆದ ಬಗ್ಗೆ ಆದೇಶ ಮಾಡಲಾಗಿದೆಯೇ? (ಆದೇಶದ ಪ್ರತಿಯನ್ನು ಒದಗಿಸುವುದು) | ಅನ್ವಯಿಸುವುದಿಲ್ಲ. |

ಸಂಖ್ಯೆ: ಗ್ರಾಅಪ 379 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ